ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಶಾಖೆ / ವಿಷಯ : DEPARTMENT / SUBJECT: ಕೋವಿಡ್-19 ವಿಧಾನಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 18/4/2021

# ಎಚ್‌ಡಿಕೆ, ನಿಖಿಲ್‌ಗೆ ಕರೊನಾ

ಬೆಂಗಳೂರು: ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಕರೊನಾ ದೃಢಪಟ್ಟಿದ್ದು, ಬೆಂಗಳೂರಿನ ಬನ್ನೇರುಘಟ್ಟ ರಸ್ತೆಯಲ್ಲಿನ ಅಪೋಲೋ ಆಸ್ಪತ್ರೆಗೆ ದಾಖಲಾಗಿದ್ದಾರೆ. ಬಸವಕಲ್ಯಾಣ ಉಪಚುನಾವಣೆ ಪ್ರಚಾರ ಮುಗಿಸಿ ಶುಕ್ರವಾರ ವಾಪಸ್ ಆದ ಎಚ್‌ಡಿಕೆಗೆ ದಣಿವು ಉಂಟಾಗಿತ್ತು. ಮನೆಗೂ ಹೋಗದೆ ಹೋಟೆಲ್‌ನಲ್ಲಿಯೇ ವಿಶ್ರಾಂತಿ ಪಡೆದಿದ್ದರು. ಕರೊನಾ ಪರೀಕ್ಷೆಗೂ ಒಳಗಾಗಿದರು. ಶನಿವಾರ ಪಾಸಿಟಿವ್ ವರದಿ



ಬಂದಿತ್ತು. ವೈದ್ಯರನ್ನು ಸಂಪರ್ಕಿಸಿ ತೋಟದ ಮನೆಯಲ್ಲಿಯೇ ವಿಶ್ರಾಂತಿ ಜತೆಗೆ ಚಿಕಿತ್ಸೆ ಪಡೆಯುವುದಾಗಿ ಹೇಳಿದರು. ವೈದ್ಯರು ಒಪ್ಪದೆ ಆಸ್ಪತ್ರೆಗೆ ದಾಖಲಾಗುವಂತೆ ಸಲಹೆ ನೀಡಿದರು. ಅನಗತ್ಯ ರಿಸ್ಕ್ ಬೇಡ ಎಂಬುದು ವೈದ್ಯರ ಸಲಹೆಯಾಗಿತ್ತು. ಕುಮಾರಸ್ವಾಮಿಗೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಪ್ರತಿಪಕ್ಷದ ನಾಯಕ ಸಿದ್ದರಾಮಯ್ಯ ಸೇರಿ ಅನೇಕ ಗಣ್ಯರು ಬೇಗ ಗುಣವಾಗುವಂತೆ ಶುಭ ಕೋರಿದ್ದಾರೆ.

ಕೋವಿಡ್ ದೃಢಪಟ್ಟ ಬೆನ್ನಲ್ಲೇ ಜಯದೇವ ಹೃದ್ರೋಗ ಆಸ್ಪತ್ರೆಯ ನಿರ್ದೇಶಕ ಡಾ. ಮಂಜುನಾಥ್ ಹಾಗೂ ಆರೋಗ್ಯ ಸಚಿವ ಡಾ.ಸುಧಾಕರ್ ಮಣಿಪಾಲ್ ಆಸ್ಪತ್ರೆಯಲ್ಲಿ ಬೆಡ್ ಕಾಯ್ದಿರಿಸಿದ್ದರು. ಎರಡನೇ ಬಾರಿ ಹೃದಯ ಶಸ್ತ್ರ ಚಿಕಿತ್ಸೆಗೆ ಒಳಗಾಗಿದ್ದ ಬನ್ನೇರುಘಟ್ಟ ರಸ್ತೆಯ ಅಪೋಲೋ ಆಸ್ಪತ್ರೆಯಲ್ಲಿ ಕರೊನಾ ಚಿಕಿತ್ಸೆ ಪಡೆಯಲು ತೀರ್ಮಾನಿಸಿ ದಾಖಲಾಗಿದ್ದು, ಚೇತರಿಸಿಕೊಳ್ಳುತ್ತಿದ್ದೇನೆ. ಬೇಗ ಗುಣಮುಖರಾಗಲೆಂದು ಹಾರೈಸಿದ ಎಲ್ಲರಿಗೂ ಪ್ರಣಾಮಗಳು.

| ಎಚ್.ಡಿ.ಕುಮಾರಸ್ವಾಮಿ ಮಾಜಿ ಸಿಎಂ (ಟ್ವೀಟ್)

**ನಿಖಿಲ್‌ಗೂ ಸೋಂಕು:** ಕುಮಾರಸ್ವಾಮಿ ಪುತ್ರ, ಜೆಡಿಎಸ್ ಯುವ ಮುಖಂಡ ನಿಖಿಲ್ ಕುಮಾರಸ್ವಾಮಿ ಅವರಿಗೂ ಸೋಂಕು ದೃಢಪಟ್ಟಿದ್ದು ಆಸ್ಪತ್ರೆಗೆ ದಾಖಲಾಗಿದ್ದಾರೆ. ತಮ್ಮ ಸಂಪರ್ಕಕ್ಕೆ ಬಂದವರು ಪರೀಕ್ಷೆ ಮಾಡಿಸಿಕೊಳ್ಳುವಂತೆ ಮನವಿ ಮಾಡಿದ್ದಾರೆ. ಕುಮಾರಸ್ವಾಮಿ ಪತ್ನಿ ಹಾಗೂ ಶಾಸಕಿ ಅನಿತಾ ಕುಮಾರಸ್ವಾಮಿ ಅವರಿಗೆ ಹೋಂ ಕ್ವಾರಂಟೈನ್ ಆಗುವಂತೆ ವೈದ್ಯರು ಸಲಹೆ ನೀಡಿದ್ದಾರೆ.